# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** ದಿನಾಂಕ: 06.07.2019

## ಈಜೀಪುರ ಎಲಿವೇಟೆಡ್ ಕಾರಿಡಾರ್ ಕಾಮಗಾರಿ ತಪಾಸಣೆ:

ಕೊರಮಂಗಲ ಸೋನಿ ವರ್ಲ್ಡ್ ಜಂಕ್ಷನ್ ಬಳಿ ನಡೆಯುತ್ತಿರುವ ಎಲಿವೇಟೆಡ್ ಕಾರಿಡಾರ್ ಕಾಮಗಾರಿ ಪ್ರಗತಿಯ ತಪಾಸಣೆ ವೇಳೆ ಪೂಜ್ಯ ಮಹಾಪೌರರು, ಮಾನ್ಯ ಆಡಳಿತ ಪಕ್ಷದ ನಾಯಕರು, ಮಾನ್ಯ ಜೆಡಿಎಸ್ ನಾಯಕಿ, ಕೋರಮಂಗಲ ಮಾನ್ಯ ಸದಸ್ಯರು, ದಕ್ಷಿಣ ವಲಯ ಜಂಟಿ ಆಯುಕ್ತರು, ಯೋಜನಾ ವಿಭಾಗದ ಮುಖ್ಯ ಅಭಿಯಂತರರು ಹಾಗೂ ಇತರೆ ಗಣ್ಯರುಗಳು ಇದ್ದರು.

ಕೊರಮಂಗಲ 100 ಅಡಿ ಮುಖ್ಯ ರಸ್ತೆಯಲ್ಲಿ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಈಜೀಪುರ ಸಿಗ್ನಲ್ ನಿಂದ ಕೇಂದ್ರೀಯ ಸದನ ಜಂಕ್ಷನ್ ವರೆಗೆ ಎಲಿವೇಟೆಡ್ ಕಾರಿಡಾರ್ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿಗೆ ವೇಗ ನೀಡಿ ತ್ವರಿತವಾಗಿ ಮುಗಿಸುವಂತೆ ಮಹಾಪೌರರು ಅಧಿಕಾರಿಗಳಿಗೆ ಸೂಚಿಸಿದರು.

2017 ಅಕ್ಟೋಬರ್ ನಲ್ಲಿ ಎಲಿವೇಟೆಡ್ ಕಾಮಗಾರಿ ಪ್ರಾರಂಭಿಸಿದ್ದು, ಒಟ್ಟು 2.5 ಕಿ.ಮಿ ಉದ್ದದ ಮೇಲ್ಸೇತುವೆಯನ್ನು 214 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಅದರಂತೆ 81 ಪಿಲ್ಲರ್ ಗಳ ನಿರ್ಮಾಣ ಕಾಮಗಾರಿ ಮುಗಿಯುವ ಹಂತಕ್ಕೆ ತಲುಪಿದ್ದು, ಮೇಲ್ಸೇತುವೆಯಲ್ಲಿ ಏಳು ಜಂಕ್ಷನ್ ಗಳು, 4 **Ramp**, ರಸ್ತೆಯ ಎರಡು ಬದಿಯಲ್ಲಿ ತಲಾ ಎರಡು ಪಥಗಳು ಬರಲಿವೆ. ಮೇಲ್ಸೇತುವೆ ಮಾರ್ಗದಲ್ಲಿ ಬರುವ 39 ಮರಗಳಲ್ಲಿ 25 ಮರಗಳನ್ನು ಸ್ಥಳಾಂತರಿಸಲಾಗಿದೆ. ಇನ್ನುಳಿದ ಮರಗಳಲ್ಲಿ ಕೊಂಬೆಗಳನ್ನು ಮಾತ್ರ ಕಟಾವು ಮಾಡಲಿದ್ದು, ಮರಗಳಿಗೆ ಯಾವುದೇ ಹಾನಿಯುಂಟಾಗುವುದಿಲ್ಲ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸರ್ಜಾಪುರ ರಸ್ತೆ ಮಾರ್ಗದಿಂದ ಈಜೀಪುರ ಕಡೆ ಹೋಗಲು ಹೆಚ್ಚುವರಿಯಾಗಿ ಒಂದು Ramp ಅಳವಡಿಸಲಾಗುತ್ತಿದ್ದು, ಅದಕ್ಕೆ ಸೆಂಟ್ ಜಾನ್ಸ್ ರೀಸರ್ಚ್ ಇನ್ಸ್ಟಿಟ್ಯೂಟ್ ಕಾಲೇಜಿನಿಂದ ಜಾಗ ಪಡೆದು, ಅವರಿಗೆ ಅಭಿವೃದ್ಧಿ ಹಸ್ತಾಂತರ ಹಕ್ಕು(ಟಿಡಿಆರ್) ಪ್ರಮಾಣಪತ್ರ ನೀಡಲಾಗುತ್ತಿದೆ. ಇನ್ನು ಸರ್ಕಾರಿ ಒಡೆತನಕ್ಕೆ ಒಳಪಟ್ಟ 3 ಆಸ್ತಿ ಮತ್ತು ಖಾಸಗಿ ಮಾಲೀಕತ್ವಕ್ಕೆ ಒಳಪಟ್ಟ 46 ಕಟ್ಟಗಳು ಸೇರಿದಂತೆ 49 ಆಸ್ತಿಗಳನ್ನು(8,599.70 ಚದರ ಮೀಟರ್) ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಈ ಪೈಕಿ ಕೆಲವರು ಟಿಡಿಆರ್ ಕೇಳುತ್ತಿದ್ದು, ಇನ್ನು ಕೆಲವರು ನಗದು ರೂಪದಲ್ಲಿ ಪರಿಹಾರ ನೀಡುವಂತೆ ಬೇಡಿಕೆಯಿಟ್ಟಿದ್ದಾರೆ. ಶೀಘ್ರ ಸಮಸ್ಯೆ ಬಗೆಹರಿಸಿ ಜಾಗ ವಶಕ್ಕೆ ಪಡೆಯಲಾಗುವುದು ಎಂದು ಯೋಜನಾ ವಿಭಾಗದ ಮುಖ್ಯ ಅಭಿಯಂತರ ಮಹಾಪೌರರಿಗೆ ಮಾಹಿತಿ ನೀಡಿದರು.

ಮೇಲ್ಸೇತುವೆ ಕೇಂದ್ರೀಯ ಸದನ ಜಂಕ್ಷನ್ ಮತ್ತು ಸೋನಿ ವರ್ಲ್ಡ್ ಜಂಕ್ಷನ್‌ಗಳ ಮೂಲಕ ಹಾದು ಹೋಗಲಿದೆ. ಕೇಂದ್ರೀಯ ಸದನ ಜಂಕ್ಷನ್ ಮೂಲಕ ತಾವರೆಕರೆ, ಎಂ.ಜಿ.ರಸ್ತೆ, ಹೊಸೂರು ರಸ್ತೆ, ಅಗರ, ಬಿಟಿಎಂ ಲೇಔಟ್, ಕೋರಮಂಗಲ, ಬಿಡಿಎ ಕಾಂಪ್ಲೆಕ್ಸ್, ಸರ್ಜಾಪುರ ಮುಖ್ಯರಸ್ತೆ ಹಾಗೂ ವಿವೇಕನಗರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹಾದು ಹೋಗುತ್ತವೆ. ಸೋನಿ ವರ್ಲ್ಡ್ ಜಂಕ್ಷನ್‌ನ ಮೂಲಕ ಇಂದಿರಾನಗರ, ಕೇಂದ್ರೀಯ ಸದನ, ವಿವೇಕನಗರ, ಜಕ್ಕಸಂದ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹಾದು ಹೋಗುತ್ತವೆ. ಮೇಲ್ಸೇತುವೆ ನಿರ್ಮಾಣದಿಂದಾಗಿ ಈ ಭಾಗದಲ್ಲಿ ಶೇ.39.69ರಷ್ಟು ವಾಹನ ದಟ್ಟಣೆ ಕಡಿಮೆಯಾಗಲಿದ್ದು, ಕನಿಷ್ಠ 30 ನಿಮಿಷಗಳಷ್ಟು ಸಮಯ ಉಳಿತಾಯವಾಗಲಿದೆ ಎಂದು ಮಾಹಿತಿ ನೀಡಿದರು.

ಮೇಲ್ಸೇತಯವೆ ಕಾಮಗಾರಿ ತ್ವರಿತವಾಗಿ ಮುಗಿದರೆ ಈ ಭಾಗದಲ್ಲಾಗುವ ಸಂಚಾರ ದಟ್ಟಣೆ ಬಹುತೇಕ ಕಡಿಮೆಯಾಗಲಿದೆ. ಜತೆಗೆ ವಾಹನ ಸವಾರರಿಗೆ ಸಂಚಾರದಟ್ಟಣೆಯಿಂದ ಮುಕ್ತಿ ಸಿಗಲಿದೆ. ಆದ್ದರಿಂದ ಕಾಮಗಾರಿಗೆ ವೇಗ ನೀಡಿ ಆದಷ್ಟು ಬೇಗ ಮುಗಿಸುವಂತೆ ಮಹಾಪೌರರು ಅಧಿಕಾರಿಗಳಿಗೆ ತಾಕೀತು ಮಾಡಿದರು. ಅದಕ್ಕೆ ಯೋಜನಾ ವಿಭಾಗದ ಮುಖ್ಯ ಅಭಿಯಂತರರು ಪ್ರತಿಕ್ರಿಯಿಸಿ, ಮುಂದಿನ ವರ್ಷ(2020) ಸೆಪ್ಟೆಂಬರ್ ವೇಳೆಗೆ ಕಾಮಗಾರಿ ಮುಗಿಸಲಾಗುವುದು ಎಂದರು.

## ಎಲಿವೇಟೆಡ್ ಕಾರಿಡಾರ್ ನಲ್ಲಿ ಬರುವ 7 ಜಂಕ್ಷನ್ ಗಳು:

1. ಈಜೀಪುರ ಮುಖ್ಯರಸ್ತೆ- ಒಳವರ್ತುಲ ರಿಂಗ್ ರಸ್ತೆ ಜಂಕ್ಷನ್

2. ಸೋನಿ ವರ್ಲ್ಡ್ ಜಂಕ್ಷನ್

3. ಕೇಂದ್ರೀಯ ಸದನ ಜಂಕ್ಷನ್

4. ಕೋರಮಂಗಲ ೮ನೇ ಮುಖ್ಯ ರಸ್ತೆ ಜಂಕ್ಷನ್

5. ಕೋರಮಂಗಲ ೬೦ ಅಡಿ ರಸ್ತೆ ಜಂಕ್ಷನ್

6. ಕೋರಮಂಗಲ ಐದನೇ ಬ್ಲಾಕ್ ೧ಎ ಕ್ರಾಸ್ ರಸ್ತೆ ಜಂಕ್ಷನ್

7. ಕೊರಮಂಗಲ ಬಿಡಿಎ ಜಂಕ್ಷನ್

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**




P-12




P-12